<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>

<u>ಸಿ.ಸಿ. ಸಂಖ್ಯೆ **142/2024**</u>

<u>ಪಿರ್ಯಾದಿ</u> : ಶ್ರೀಮತಿ ಪವಿತ್ರ.ಹೆಚ್.ಹೆಚ್,
ವಯಸ್ಸು ಸುಮಾರು 33 ವರ್ಷ,
ಕೋಂ ಕೆ.ಎಸ್.ಗುರುಪ್ರಸಾದ್,
ಮಾಲೀಕರುಃ ಚಂದನ್ ಬಾರ್ ಅಂಡ್
ರೆಸ್ಟೋರೆಂಟ್, ಚಂದನ್ ಟವರ್ಸ್,
ಕೆ.ಎಂ ರಸ್ತೆ,, ಮೂಡಿಗೆರೆ ಪಟ್ಟಣ,
ಮೂಡಿಗೆರೆ ಅಂಚೆ ಮತ್ತು ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

ವಾಸಃ ಕಾರಮಕ್ಕಿ, ಹಳೇಕೋಟೆ ಗ್ರಾಮ,
ಬಿದರಹಳ್ಳಿ ಅಂಚೆ, ಮೂಡಿಗೆರೆ ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

ವಿರುದ್ಧ

<u>ಆರೋಪಿ</u> : ಶ್ರೀ ವಿ.ರವಿಕುಮಾರ್,
ವಯಸ್ಸು ಸುಮಾರು 37 ವರ್ಷ,
ಬಿನ್ ವಿರುಪಾಕ್ಷಪ್ಪ, ವಾಡ್ ಸಂಖ್ಯೆ 8,
ಮಾದನಹಳ್ಳಿ, ವಿದ್ಯಾನಿಧಿ ಶಾಲೆ ಹಿಂಭಾಗ,
ಗೌರಿಬಿದನೂರು-561 208,
ಚಿಕ್ಕಬಳ್ಳಾಪುರ ಜಿಲ್ಲೆ.

<u>ಆಪಾದನೆಯ ಸಾರಾಂಶ</u>

ಶ್ರೀ ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಪಿರ್ಯಾದುದಾರರ ಆಲ್ದೂರು ಶಾಖೆಯ ಚಂದನ್ ಬಾರ್ ಅಂಡ್ ರೆಸ್ಟೋರೆಂಟ್ ನಲ್ಲಿ 2023 ನೇ ಇಸವಿ ಜನವರಿಯಿಂದ ಕ್ಯಾಷಿಯರ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಸದರಿ ಅಂಗಡಿಯ ಸ್ಟಾಕಿನ ಒಟ್ಟು ಮೊತ್ತ 3,97,258/- ರೂಗಳನ್ನು ದುರುಪಯೋಗಪಡಿಸಿಕೊಂಡಿದ್ದು, ಸದರಿ ವಿಷಯವನ್ನು ಪಿರ್ಯಾದುದಾರರು ನಿಮ್ಮ ಗಮನಕ್ಕೆ ತಂದಾಗ, ನೀವು ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಸ್ಟೇಟ್ ಬ್ಯಾಂಕ್ ಇಂಡಿಯಾ, ಗೌರಿಬಿದನೂರಿನ ರೈಲ್ವೇ ಸ್ಟೇಷನ್ ರಸ್ತೆ ಶಾಖೆಯ ಚೆಕ್ ಸಂಖ್ಯೆ 559330, ದಿನಾಂಕ 19.12.2023, ರೂ.3,97,258/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್

ಅನ್ನು ಫಿರ್ಯಾದಿಯು ಕರ್ನಾಟಕ ಬ್ಯಾಂಕ್, ಮೂಡಿಗೆರೆ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ (Funds Insufficient) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 09.01.2024 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ **138** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

***(***ದಿನಾಂಕ 04.12.2025 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ***,*** ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು***.*** ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ***)***

**Sd/-**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
**ಜೆ.ಎಂ.ಎಫ್.ಸಿ, ಮೂಡಿಗೆರೆ.**

ಮೂಡಿಗೆರೆ
ದಿನಾಂಕಃ 04.12.2025